## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ: 3054-80-196-1-03-300 (ಯೋಜನೆ) Lumpsum ಅಡಿ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಕೈಗೊಂಡು ಪೂರ್ಣಗೊಳಿಸಿದ ಗ್ರಾಮೀಣ ರಸ್ತೆ ಅಬಿವೃದ್ಧಿ ಕಾಮಗಾರಿಗಳ ಬಿಲ್ ಪಾವತಿಗೆ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:
1. ಗ್ರಾಅಪ:64/27:ಆರ್‌ಆರ್‌ಸಿ:2014, ದಿ:25.09.2014.
2. ಗ್ರಾಅಪ:23:ಆರ್‌ಆರ್‌ಸಿ:2015 ದಿನಾಂಕ:07.03.2015
3. ಆರ್ಥಿಕ ಇಲಾಖೆಯ ಕಂಡಿಕೆ ಟಿಪ್ಪಣಿ ಸಂಖ್ಯೆ:ಎಫ್‌ಡಿ:233:ವೆಚ್ಚ 6/2016 ದಿನಾಂಕ:24-5-2016.

**ಪ್ರಸ್ತಾವನೆ:**

ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಲೆಕ್ಕ ಶೀರ್ಷಿಕೆ: 3054-80-196-1-03-300 (ಯೋಜನೆ)ರಡಿ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಮೇಲೆ ಓದಲಾದ-1 ರಿಂದ 2ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿ ಇಲಾಖೆಯಿಂದ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

ಸದರಿ ಆದೇಶಗಳಂತೆ ಕೈಗೊಂಡ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿನ ಕೈಗೊಂಡ ಗ್ರಾಮೀಣ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಿಲ್ ಪಾವತಿಗಾಗಿ ಆರ್ಥಿಕ ಇಲಾಖೆಯ ಮೇಲೆ ಓದಲಾದ-3ರಲ್ಲಿ ಲೆಕ್ಕ ಶೀರ್ಷಿಕೆ-3054-04-337-1-12ರಡಿ ಭರಿಸಲು ನೀಡಿದ ಸಹಮತಿಯಂತೆ ಪೂರ್ಣಗೊಂಡ ಕಾಮಗಾರಿಗಳ ಬಿಲ್ ಪಾವತಿಗಾಗಿ ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯಿತಿಗೆ ರೂ.82.00ಲಕ್ಷಗಳನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:72/6:ಆರ್‌ಆರ್‌ಸಿ:2016, ಬೆಂಗಳೂರು, ದಿನಾಂಕ:05.07.2016.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಮೇಲೆ ಓದಲಾದ-1 ಮತ್ತು 2ರ ಆದೇಶಗಳನ್ವಯ ಕೈಗೊಂಡು ಪೂರ್ಣಗೊಳಿಸಿದ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಾಕಿ ಬಿಲ್ ಮೊತ್ತ ಪಾವತಿಗೆ **ರೂ.82.00 ಲಕ್ಷ (ರೂಪಾಯಿಗಳು ಎಂಬತ್ತೆರಡು ಲಕ್ಷಗಳು ಮಾತ್ರ)**ಗಳನ್ನು ಲೆಕ್ಕ ಶೀರ್ಷಿಕೆ-3054-04-337-1-12ರಡಿ ಕೆಳಕಂಡ ಷರತ್ತುಗಳಿಗೊಳಪಟ್ಟು ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯಿತಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು:**

1. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಅನುದಾನವನ್ನು ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಪಂ.ರಾಜ್ ಇಂಜಿನಿಯರಿಂಗ್ ವಿಭಾಗದಿಂದ ಅನುಷ್ಠಾನಗೊಳಿಸಿದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ರೂ.82.00 ಲಕ್ಷಗಳನ್ನು ಬಾಕಿ ಬಿಲ್ ಮೊತ್ತ ಪಾವತಿಸಲು ಮಾತ್ರ ಉಪಯೋಗಿಸತಕ್ಕದ್ದು. ಈ ಅನುದಾನವನ್ನು ಮಾರ್ಗಪಲ್ಲಟ ಮಾಡುವಂತಿಲ್ಲ ಹಾಗೂ ಯಾವುದೇ ಕಾರಣಕ್ಕೂ ವ್ಯಪಗತವಾಗದಂತೆ ನೋಡಿಕೊಳ್ಳತಕ್ಕದ್ದು.

2. ಪೂರ್ಣಗೊಂಡ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿರುವುದನ್ನು ಖಚಿತಪಡಿಕೊಂಡು ಕಾಮಗಾರಿಗಳ ಬಿಲ್ಲುಗಳನ್ನು ಪಾವತಿಸತಕ್ಕದ್ದು. ತಪ್ಪಿದಲ್ಲಿ ಕಾರ್ಯಪಾಲಕ ಇಂಜಿನಿಯರ್ ಹಾಗೂ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು ಜವಾಬ್ದಾರರಾಗುತ್ತಾರೆ.

3. ಬಳಕೆಯಾದ ಹಣ ಮತ್ತು ಕಾಮಗಾರಿ ಪ್ರಗತಿಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರಿಗೆ ಒದಗಿಸತಕ್ಕದ್ದು.

4. ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿರುವ ಹೆಚ್ಚುವರಿ ರಸ್ತೆ ಕಾಮಗಾರಿಯನ್ನು Worksoft works monitoring ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು Worksoft website ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.

5. 2014-15ನೇ ಸಾಲಿನಿಂದ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಹಣ ಪಾವತಿಸಲು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈಗಾಗಲೇ ಸೂಚಿಸಲಾಗಿದೆ. ಅದರಂತೆ, ಪ್ರಸ್ತುತ ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನಕ್ಕೆ ಸಂಬಂಧಿಸಿದಂತೆ ಕೈಗೊಂಡು ಪೂರ್ಣಗೊಳಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿರುವ ನಿಬಂಧನೆಗೊಳಪಡಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಕಂಡಿಕೆ ಟಿಪ್ಪಣಿ ಸಂಖ್ಯೆ:ಎಫ್‌ಡಿ 233 ವೆಚ್ಚ-6/2016 ದಿನಾಂಕ:24-5-2016 ರಲ್ಲಿ ನೀಡಿದ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು

7. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
8. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
10. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
14. ಜಿಲ್ಲಾ ಖಜಾನಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ.
15. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9
17. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ
18. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬೆಂಗಳೂರು.
19. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ.
20. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ
21. ರಕ್ಷಾ ಕಡತ / ಹೆಚ್ಚುವರಿ ಪ್ರತಿ.